ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ. ಎಸ್.ಅರುಣ್ ಇವರು ನಿಯಮ-72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ. 115

**ವಿಷಯ:**

ಲಾಸ್ಟ್ ಮೈಲ್ ಕನೆಕ್ಟಿವಿಟಿ (ಸಂಪರ್ಕ) ಯಲ್ಲಿ ಇದುವರೆಗು ವೈಟ್ ಬೋರ್ಡ್ ವಾಹನಗಳಿಗೆ ಮಾತ್ರ ಅವಕಾಶ ಕಲ್ಪಿಸಿದ್ದು, ಹಳದಿ ಬೋರ್ಡ್ (yellow) ವಾಹನಗಳಿಗೂ ಸಹ ಅವಕಾಶ ಕಲ್ಪಿಸುವುದು ಹಾಗೂ ಕೆಲವು ನಿಯಮ ಸಡಿಲಿಕೆಯ ಕುರಿತು ಸರ್ಕಾರದ ಗಮನ ಸೆಳೆಯಲು ಬಯಸುತ್ತೇನೆ

**ಉತ್ತರ:**

ಕರ್ನಾಟಕ ರಾಜ್ಯದ ಬೃಹತ್ ನಗರಗಳು, ಜಿಲ್ಲಾ ಕೇಂದ್ರಗಳು, ತಾಲ್ಲೂಕು ಕೇಂದ್ರಗಳು ಹಾಗೂ ಗ್ರಾಮೀಣ ಪ್ರದೇಶಗಳ ನಡುವೆ ಸಾರಿಗೆ ಸಂಪರ್ಕ ಕಲ್ಪಿಸುವ ಸಲುವಾಗಿ ಸರ್ಕಾರದ ಅಧೀನ ಸಾರಿಗೆ ಸಂಸ್ಥೆ ಹಾಗೂ ಖಾಸಗಿ ಮಾಲೀಕರು ವಾಹನ ಪ್ರವರ್ತಕರು ಸಾರಿಗೆ ಸೌಲಭ್ಯ ಒದಗಿಸುತ್ತಿದ್ದಾರೆ

ಇದರ ಜೊತೆಗೆ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕ ಕಲ್ಪಿಸುವ ದೃಷ್ಟಿಯಿಂದ ರಾಜ್ಯದ ಎಲ್ಲಾ ನಗರಗಳು, ಜಿಲ್ಲಾಕೇಂದ್ರಗಳು, ತಾಲ್ಲೂಕು ಕೇಂದ್ರಗಳಲ್ಲಿ ಆಟೋರಿಕ್ಷಾಗಳಿಗೆ ಪರವಾನಗಿ ನೀಡಲಾಗಿದೆ. ಇದರ ಜೊತೆಗೆ ಮೋಟಾರು ವಾಹನ ಕಾಯ್ದೆ 1988ರ ಸೆಕ್ಷನ್ 75ರ ಅಡಿಯಲ್ಲಿ ರೆಂಟ್-ಎ-ಮೋಟಾರ್ ಕ್ಯಾಬ್ ಸ್ಕೀಂ 1989 ಹಾಗೂ ರೆಂಟ್-ಎ-ಮೋಟಾರ್ ಸೈಕಲ್ ಸ್ಕೀಂ 1997 ಗಳನ್ನು ಜಾರಿಗೆ ತರಲಾಗಿದೆ. ಈ ಯೋಜನೆಗಳ ಅಡಿಯಲ್ಲಿ ಬೇರೆ ಪ್ರದೇಶಗಳಿಂದ ಬಂದಂತ ಪ್ರವಾಸಿಗರು ಕೊನೆ ಹಂತದ ಗುರಿ ತಲುಪಲು ವಾಹನಗಳನ್ನು ಬಾಡಿಗೆಗೆ ಪಡೆದು ತಾವೇ ಚಾಲನೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ಪ್ರಯಾಣಿಕರಿಗೆ ಕೊನೆ ಹಂತದ ಸಾರಿಗೆ ಸೌಲಭ್ಯ ಕಲ್ಪಿಸಿದಂತಾಗಿದೆ

ಇದಲ್ಲದೆ, ಆಪ್ ಆಧಾರಿತ ಅಗ್ರಿಗೇಟರ್ ಟ್ಯಾಕ್ಸಿಗಳ ಸೇವೆಯನ್ನು ಒದಗಿಸುವ ಸಲುವಾಗಿ ಕರ್ನಾಟಕ ಆನ್ ಡಿಮ್ಯಾಂಡ್ ಟ್ರಾನ್ಸ್‌ಪೋರ್ಟೇಶನ್ ಟೆಕ್ನಾಲಜಿ ಅಗ್ರಿಗೇಟರ್ಸ್ ನಿಯಮಾವಳಿ 2016 ನ್ನು ಜಾರಿಗೆ ತರಲಾಗಿದ್ದು ಪ್ರಯಾಣಿಕರು ತಮ್ಮ ಮೊದಲ ಹಾಗೂ ಕೊನೆ ಹಂತದ ಗುರಿ ತಲುಪಲು ಮನೆಯಿಂದ ಅಥವಾ ಕಾದಿರುವ ಸ್ಥಳದಿಂದಲೇ ವಾಹನಗಳನ್ನು ನಿಗದಿ ಮಾಡುವ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಈ ಯೋಜನೆಯ ಅಡಿಯಲ್ಲಿ 15 ಸಂಸ್ಥೆಗಳಿಗೆ ಲೈಸೆನ್ಸ್ ನೀಡಲಾಗಿದೆ.

ಮುಂದುವರೆದು, ಕರ್ನಾಟಕ ಸರ್ಕಾರವು ಸಾರ್ವಜನಿಕ ಸಾರಿಗೆಗಾಗಿ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ದೃಷ್ಟಿಯಿಂದ ರಾಜ್ಯದ ಪ್ರಮುಖ ನಗರಗಳಿಗೆ ಅನ್ವಯವಾಗುವಂತೆ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ-2021ನ್ನು ಜಾರಿಗೆ ತಂದಿದೆ. ವಿದ್ಯುತ್ ಚಾಲಿತ ಸಾರಿಗೆ ಬೈಕ್‌ಗಳನ್ನು ಹೊಂದಿರುವ ವ್ಯಕ್ತಿಗಳು ಸದರಿ ವಾಹನಗಳನ್ನು ಟ್ಯಾಕ್ಸಿಗಳಾಗಿ ಬಳಕೆ ಮಾಡುವ ಮೂಲಕ ಸಾರ್ವಜನಿಕರಿಗೆ ಸಾರಿಗೆ ಸೇವೆಯನ್ನು ಬಾಡಿಗೆ ಆಧಾರದಲ್ಲಿ ಒದಗಿಸಲು ಅವಕಾಶ ಕಲ್ಪಿಸಿದೆ. ಆರಂಭಿಕ ಹಾಗೂ ಕೊನೆಯ ಹಂತದ ಸಾರಿಗೆ ಸಂಪರ್ಕಕ್ಕೆ ಈ ವಾಹನಗಳನ್ನು ಬಳಸಿಕೊಳ್ಳಬಹುದಾಗಿದೆ.

ಮೇಲೆ ತಿಳಿಸಲಾದ ಎಲ್ಲಾ ಯೋಜನೆಗಳಲ್ಲಿ ಹಳದಿ ಬೋರ್ಡ್ ಹೊಂದಿರುವ ಸಾರಿಗೆ ವರ್ಗದ ವಾಹನಗಳನ್ನು ಮಾತ್ರ ಬಳಕೆ ಮಾಡಲು ಅವಕಾಶ ಕಲ್ಪಿಸಿದೆ. ಬಿಳಿ ಬೋರ್ಡ್ ಹೊಂದಿರುವ ಸಾರಿಗೇತರ ವಾಹನಗಳನ್ನು ಬಾಡಿಗೆ ಆಧಾರದಲ್ಲಿ ಓಡಿಸಲು ಮೋಟಾರು ವಾಹನ ಕಾಯ್ದೆ ಮತ್ತು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ. ಬಿಳಿ ಬೋರ್ಡ್ ಸಾರಿಗೇತರ ವಾಹನಗಳು ಕೇವಲ ವೈಯಕ್ತಿಕ ಬಳಕೆಯ ವಾಹನಗಳಾಗಿರುತ್ತವೆ.

ಹಳದಿ ಬಣ್ಣದ ಬೋರ್ಡ್ ಹೊಂದಿರುವ ಸಾರಿಗೆ ವಾಹನಗಳಿಗೆ ಕೊನೆ ಹಂತದ ಸಾರಿಗೆ ಸಂಪರ್ಕ ಕಲ್ಪಿಸುವುದಕ್ಕಾಗಿ ಕಾನೂನಿನಲ್ಲಿ ಲಭ್ಯವಿರುವ ಅವಕಾಶಗಳನ್ನು ಒದಗಿಸಲಾಗಿರುತ್ತದೆ.

ಸಾಇ 115 ಟಿಡಿಕ್ಯೂ 2022

(ಬಿ. ಶ್ರೀರಾಮುಲು)
ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು.